ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

29

ಇಲಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE: 27/11/20

# ಬಿಜೆಪಿ ಶಾಸಕನಿಗೆ ಆಮಿಷ ಒಡ್ಡಿದ ಲಾಲು ವಿರುದ್ಧ ಪ್ರಕರಣ ದಾಖಲು

**ಪಟನಾ:** ಸ್ಪೀಕರ್ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿಯನ್ನು ಸೋಲಿಸಲು ನೆರವಾಗುವಂತೆ ಜೈಲಿನಿಂದಲೇ ಎನ್‌ಡಿಎ ಶಾಸಕರಿಗೆ ಕರೆ ಮಾಡಿದ್ದ ಆರ್‌ಜೆಡಿ ವರಿಷ್ಠ ಲಾಲು ಪ್ರಸಾದ್ ಯಾದವ್



ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಮೇವು ಹಗರಣದಲ್ಲಿ ಜೈಲು ಶಿಕ್ಷೆ ಅನುಭವಿಸುರುತ್ತಿರುವ ಲಾಲು ರಾಂಚಿ ಜೈಲಿನಲ್ಲಿದ್ದಾರೆ. ಅಲ್ಲಿಂದಲೇ ಮಂಗಳವಾರ ರಾತ್ರಿ ಬಿಜೆಪಿ ಶಾಸಕ ಲಲನ್ ಕುಮಾರ್ ಪಾಸ್ವಾನ್ ಅವರಿಗೆ ಕರೆ ಮಾಡಿ, "ಕೊರೊನಾ ನೆಪದಲ್ಲಿ ಅಧಿವೇಶನಕ್ಕೆ ಗೈರು ಹಾಜರಾಗಿ. ಸ್ಪೀಕರ್ ಚುನಾವಣೆಯಲ್ಲಿ ಸೋಲುಂಟಾದರೆ ಸರಕಾರಕೆ ಮುಖಭಂಗವಾಗುತ್ತದೆ. ನಂತರ ನಾವು ಸರಕಾರ ಬೀಳಿಸುತ್ತೇವೆ. ಮುಂದೆ ಬರಲಿರುವ ಮಹಾಘಟಬಂಧನ್ ಸರಕಾರದಲ್ಲಿ ನಿಮಗೆ ಸಚಿವ ಸ್ಥಾನ ನೀಡಲಾಗುವುದು," ಎಂದು ಆಮಿಷವೊಡ್ಡಿದ್ದರು. ಕರೆ ಮಾಹಿತಿ ಸಮೇತ ಪಾಸ್ವಾನ್ ಅವರು ಪೊಲೀಸ್ ಜಾಗೃತ ದಳಕ್ಕೆ ದೂರು ನೀಡಿದ್ದಾರೆ. ಲಾಲು ವಿರುದ್ಧ ಭ್ರಷ್ಟಾಚಾರ ನಿಗ್ರಹ ಕಾಯಿದೆ ಹಾಗೂ ಭಾರತೀಯ ದಂಡ ಸಂಹಿತೆಯ ಹಲವು ಕಲಮುಗಳ ಅಡಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ. ಸ್ಪೀಕರ್ ಚುನಾವಣೆ ಸಂಬಂಧ ಲಾಲು ತಮಗೂ ಹಲವು ಕರೆ ಮಾಡಿದ್ದರು ಎಂದು ಹಿಂದೂಸ್ತಾನಿ ಅವಾಮ್ ಮೋರ್ಚಾ ಮುಖ್ಯಸ್ಥ ಜಿತಿನ್ ರಾಮ್ ಮಾಂಝಿ ಅವರೂ ತಿಳಿಸಿದ್ದಾರೆ. ಬುಧವಾರ ನಡೆದ ಸ್ಪೀಕರ್ ಚುನಾವಣೆಯಲ್ಲಿ ಬಿಜೆಪಿಯ ವಿಜಯ್‌ಕುಮಾರ್ ಸಿನ್ಹಾ ಆಯ್ಕೆಯಾಗಿದ್ದಾರೆ.